ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/06/ಇಸಿಎಸ್(1)/2017

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-1
ದಿನಾಂಕ:21-11-2017

## ಸುತ್ತೋಲೆ

ವಿಷಯ: ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಉಪಯೋಗಿಸದೆ ಇರುವ ATS Tag ಎಂದು ಮೊಹರು ಮಾಡಿರುವ ಹಳೆಯ ಉತ್ತರ ಪತ್ರಿಕೆಗಳನ್ನು ಉಪಯೋಗಿಸುವ ಕುರಿತು.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಂಖ್ಯೆ:ಬಿಟಿಇ/42/ಇಎಫ್‌ಎಸ್/2017 ದಿನಾಂಕ:07/11/2017

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2017 ನವೆಂಬರ್/ಡಿಸೆಂಬರ್ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಗಳಿಗೆ ಈ ಹಿಂದೆ ಮಂಡಳಿಯಿಂದ ಸರಬರಾಜಾಗಿ ಉಪಯೋಗಿಸದೆ ಉಳಿದಿರುವ ATS Tag ಎಂದು ಮೊಹರು ಮಾಡಿರುವ ಹಳೆಯ ಉತ್ತರ ಪತ್ರಿಕೆಗಳನ್ನು ಉಪಯೋಗಿಸದೆ ಮಂಡಳಿಗೆ ಹಿಂದಿರುಗಿಸುವಂತೆ ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು. ಆದರೆ ಕಾರಣಾಂತರಗಳಿಂದ ಸದರಿ ಉತ್ತರ ಪತ್ರಿಕೆಗಳನ್ನು ಬಳಸುವ ಕುರಿತಂತೆ ಈ ಕೆಳಗೆ ತಿಳಿಸಿರುವಂತೆ ಮಾರ್ಪಾಟು ಮಾಡಲಾಗಿದೆ.

ಪ್ರಸಕ್ತ 2017 ನವೆಂಬರ್/ಡಿಸೆಂಬರ್ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಗಳಿಗೆ ಹೊಸದಾಗಿ ಸರಬರಾಜು ಮಾಡಲಾದ ಉತ್ತರಪತ್ರಿಕೆಗಳನ್ನು ಮೊದಲು ಉಪಯೋಗಿಸಿ ನಂತರ ಕಡಿಮೆ ಬಂದಲ್ಲಿ ಅಥವಾ ಅನಿವಾರ್ಯವಾಗಿ ಹೊಸ ಉತ್ತರಪತ್ರಿಕೆಗಳ ದಾಸ್ತಾನು ಇಲ್ಲದಿದ್ದಲ್ಲಿ, ಉಪಯೋಗಿಸದೆ ಉಳಿದಿರುವ ATS Tag ಎಂದು ಮೊಹರು ಮಾಡಿರುವ ಹಳೆಯ ಉತ್ತರ ಪತ್ರಿಕೆಗಳನ್ನು ಪರೀಕ್ಷೆಗೆ ಬಳಸಬಹುದಾಗಿದೆ ಎಂದು ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರು ಹಾಗೂ ಪರೀಕ್ಷಾ ಕೇಂದ್ರಗಳ ಅಧೀಕ್ಷಕರು/ಉಪಮುಖ್ಯ ಅಧೀಕ್ಷಕರು/ಪರೀಕ್ಷಕರು/ವೀಕ್ಷಕರುಗಳಿಗೆ ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,

1. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ – ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು/ಉಪಮುಖ್ಯ ಅಧೀಕ್ಷಕರು/ಪರೀಕ್ಷಕರು/ವೀಕ್ಷಕರುಗಳಿಗೆ – ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ

ಪ್ರತಿ:

1. ಇ ಗವರ್ನೆನ್ಸ್ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
2. ಗಣಕ ಕೇಂದ್ರ- ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು.